FEBRUARY 17, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಬೆಳಗಾವಿ ಜಿಲ್ಲೆ, ಬೈಲಹೊಂಗಲದ, ಸಾರ್ವಜನಿಕ ಆಸ್ಪತ್ರೆ ಆವರಣದಲ್ಲಿ, 50 ಹಾಸಿಗೆಯುಳ್ಳ, ತೀವ್ರ ನಿಗಾ ಘಟಕ ನಿರ್ಮಾಣಕ್ಕೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ, ದಿನೇಶ ಗುಂಡೂರಾವ, ಶಂಕುಸ್ಥಾಪನೆ ನೆರವೇರಿಸಿದರು. ಬಳಿಕ ಮಾತನಾಡಿದ ಸಚಿವರು, ಬೆಳಗಾವಿ ಜಿಲ್ಲೆಯ ಬೈಲಹೊಂಗಲದಲ್ಲಿ, 23 ಕೋಟಿ ರೂಪಾಯಿ ವೆಚ್ಚದಲ್ಲಿ ತೀವ್ರ ನಿಗಾ ಘಟಕ, ಸವದತ್ತಿಯಲ್ಲಿ 30 ಕೋಟಿ ಮತ್ತು ರಾಮದುರ್ಗದಲ್ಲಿ, 33 ಕೋಟಿ ರೂಪಾಯಿ ವೆಚ್ಚದಲ್ಲಿ, ನೂರು ಹಾಸಿಗೆಗಳ ಸುಸಜ್ಜಿತ ಆಸ್ಪತ್ರೆಗಳನ್ನು, ಒಟ್ಟು 87 ಕೋಟಿ ರೂಪಾಯಿ ಅಂದಾಜು ವೆಚ್ಚದಲ್ಲಿ, ನಿರ್ಮಿಸಲಾಗುವುದು ಎಂದರು.

<><><>

ದಿನೇಶ ಗುಂಡೂರಾವ ಧ್ವನಿ 24 ಸೆಕೆಂದುಗಳು

<><><>

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ– ಕೆ.ಆರ್.ಐ.ಡಿ.ಎಲ್ ಸಂಸ್ಥೆ, ಕೈಗೊಂಡಿರುವ ಕಾಮಗಾರಿಗಳನ್ನು ತ್ವರಿತವಾಗಿ ಮುಂದುವರಿಸಬೇಕು, ಸಮುದಾಯ ಶೌಚಾಲಯಗಳನ್ನು ನಿಗದಿತ ಸಮಯದೊಳಗೆ ಪೂರ್ಣಗೊಳಿಸಬೇಕು ಎಂದು ಪಂಚಾಯತ್ ರಾಜ್ ಮತ್ತು ಗ್ರಾಮೀಣಾಭಿವೃದ್ಧಿ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ನಿಗಮದ ಅಡಿಯಲ್ಲಿ, ಕೆ.ಆರ್.ಐ.ಡಿ.ಎಲ್ ಸಂಸ್ಥೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಕಾಮಗಾರಿಗಳ ಪ್ರಗತಿ ಪರಿಶೀಲನೆ ಸಭೆಯಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಕಾಮಗಾರಿಗಳ ಅನುಷ್ಠಾನದಲ್ಲಿ ಸಮಸ್ಯೆಗಳಿದ್ದಲ್ಲಿ, ಮೇಲಧಿಕಾರಿಗಳ ಗಮನಕ್ಕೆ ತಂದು ಸಮಸ್ಯೆ ಬಗೆಹರಿಸಿಕೊಳ್ಳಬೇಕು ಎಂದು ಸೂಚಿಸಿದರು.

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ, ಆಡಳಿತ ಪಕ್ಷದ, ಪರಿಶಿಷ್ಟ ಜಾತಿ ಶಾಸಕರುಗಳ ಜೊತೆ, 2026–27 ನೇ ಸಾಲಿನ ಆಯವ್ಯಯ ಕುರಿತಾಗಿ ಸಭೆ ನಡೆಸಿ, ಸಮುದಾಯದ ಬೇಡಿಕೆಗಳನ್ನು ಆಲಿಸಿದರು.

<><><>

ಬೇಸಿಗೆ ಕಾಲದಲ್ಲಿ, ಧಾರವಾಡ ಜಿಲ್ಲೆಯಾದ್ಯಂತ, ಕುಡಿಯುವ ನೀರಿನ ಸಮಸ್ಯೆಯಾಗದಂತೆ, ಮುಂಜಾಗ್ರತೆ ವಹಿಸಲಾಗಿದೆ ಎಂದು, ಜಿಲ್ಲಾಧಿಕಾರಿ ಆರ್.ಸ್ನೇಹಲ್ ತಿಳಿಸಿದ್ದಾರೆ. ಧಾರವಾಡ ಜಿಲ್ಲೆ, ಹುಬ್ಬಳ್ಳಿಯ ತೆಹಸೀಲ್ದಾರ ಕಚೇರಿಯಲ್ಲಿ, ಸಾರ್ವಜನಿಕರ ಅಹವಾಲು ಆಲಿಸಿ, ಅವರು ಮಾತನಾಡಿದರು. ಧಾರವಾಡ ಜಿಲ್ಲೆಯಲ್ಲಿ, ಸಾರ್ವಜನಿಕರ ಸಮಸ್ಯೆಗಳಿಗೆ, ತ್ವರಿತ ಪರಿಹಾರ, ಶಿಕ್ಷಣದ

ಗುಣಮಟ್ಟ ಹೆಚ್ಚಳ ಹಾಗೂ ಬೇಸಿಗೆಯಲ್ಲಿ ಕುಡಿಯುವ ನೀರಿನ ನಿರ್ವಹಣೆಗೆ, ಜಿಲ್ಲಾಡಳಿತ ಸಮಗ್ರ ಕಾರ್ಯ ಯೋಜನೆ ರೂಪಿಸಿದೆ ಎಂದರು.

<><><>

ಹುಬ್ಬಳ್ಳಿ, ಧಾರವಾಡ ನಗರ ಹಾಗೂ ಜಿಲ್ಲೆಯಲ್ಲಿ, ಬೀದಿ ನಾಯಿಗಳ ದತ್ತು ಕಾರ್ಯಕ್ರಮ, 22ನೇ ತಾರೀಖು ಆಯೋಜಿಸಲಾಗಿದೆ ಎಂದು, ಜಿಲ್ಲಾ ಪಂಚಾಯಿತಿ ಸಿ.ಇ.ಓ. ಭುವನೇಶ ಪಾಟೀಲ, ತಿಳಿಸಿದ್ದಾರೆ. ಧಾರವಾಡ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಪೂರ್ವಭಾವಿ ಸಭೆ ನಡೆಸಿದ ಅವರು, ಶ್ವಾನ ಪ್ರದರ್ಶನದ ಭಿತ್ತಿಪತ್ರಗಳನ್ನು ಬಿಡುಗಡೆ ಮಾಡಿದರು.

<><><>

ಬೀದರ ಜಿಲ್ಲೆ ಭಾಲ್ಕಿ ತಾಲೂಕು, ಬ್ಯಾಲಹಳ್ಳಿ ಗ್ರಾಮದ ಸಮೀಪ ಕಾರಂಜಾ ಜಲಾಶಯದ ಕಾಲುವೆಯಲ್ಲಿ, ಸಂಭವಿಸಿದ ಅವಘಡದಲ್ಲಿ ತಂದೆ ಹಾಗೂ ಮಗ ಇಬ್ಬರು ಪ್ರಾಣ ಕಳೆದುಕೊಂಡ ಘಟನೆ ಸಂಭವಿಸಿದೆ. ಕೆಲಸ ಮುಗಿಸಿಕೊಂಡು ಮನೆಗೆ ತೆರಳುವ ವೇಳೆ, ಕೈಕಾಲು ತೊಳೆಯಲು ಕಾಲುವೆಗೆ ಇಳಿದ ಅಂಬರೀಶ್, ಕಾಲು ಜಾರಿ ನದಿಗೆ ಬಿದ್ದಿದ್ದಾರೆ, ಮಗನನ್ನು ರಕ್ಷಿಸಲು, ಮುಂದಾದ ವಿಶ್ವನಾಥ ಕೂಡಾ ನೀರಿನಲ್ಲಿ ಮುಳಗಿ ಮೃತಪಟ್ಟಿದ್ದಾರೆ. ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ, ಇಬ್ಬರ ಅಕಾಲಿಕ ನಿಧನಕ್ಕೆ ಕಂಬನಿ ಮಿಡಿದಿದ್ದು, ಸಂತಾಪ ಸೂಚಿಸಿದ್ದಾರೆ.

<><><>

ಯಾದಗಿರಿ ಜಿಲ್ಲೆ, ಸುರಪುರ ತಾಲೂಕು, ಕೆಂಭಾವಿ ಪಟ್ಟಣದ ಪುರಸಭೆ ಆವರಣದಲ್ಲಿ, ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಯೋಜನೆ ಅಡಿ, 2025–26 ನೇ ಸಾಲಿನ 6 ಕೋಟಿ ರೂಪಾಯಿ ವೆಚ್ಚದ ವಿವಿಧ ಕಾಮಗಾರಿಗಳಿಗೆ, ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಭೂಮಿಪೂಜೆ ನೆರವೇರಿಸಿದರು.

<><><>

ದೇಶದ ಮೊತ್ತ ಮೊದಲ ಹೆಲಿಕಾಪ್ಟರ್ ಜೋಡಣೆ ಘಟಕ ಕೋಲಾರ ಜಿಲ್ಲೆ ವೇಮಗಲ್‌ನಲ್ಲಿ ಸ್ಥಾಪನೆಯಾಗಿದ್ದು, ಇಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಹಾಗೂ ಫ್ರಾನ್ಸ್ ಅಧ್ಯಕ್ಷ ಎಮ್ಯಾನುಯೆಲ್ ಮ್ಯಾಕ್ರನ್ ವರ್ಚುವಲ್ ಮೂಲಕ ಚಾಲನೆ ನೀಡಲಿದ್ದಾರೆ. ಇದೇ ವೇಳೆ ಕೇಂದ್ರ ರಕ್ಷಣಾ ಖಾತೆ ಸಚಿವ ರಾಜನಾಥ್ ಸಿಂಗ್ ವೇಮಗಲ್ ನ ಈ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

<><><>

ವಿಜಯಪುರ ಜಿಲ್ಲೆ, ಬಬಲೇಶ್ವರ ವಿಧಾನಸಭಾ ಕ್ಷೇತ್ರದ, ತಿಕೋಟಾದಲ್ಲಿ 12 ಕೋಟಿ 40 ಲಕ್ಷ ರೂಪಾಯಿ ವೆಚ್ಚದಲ್ಲಿ, ಶೀತಲೀಕರಣ ಘಟಕ ನಿರ್ಮಾಣಕ್ಕೆ, ಸಚಿವ ಸಂಪುಟ ಅನುಮೋದನೆ ನೀಡಿದೆ ಎಂದು, ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ತಿಳಿಸಿದ್ದಾರೆ. ಶೀತಲೀಕರಣ ಘಟಕದ ಸ್ಥಾಪನೆಯಿಂದ, ರೈತರ ಉತ್ಪನ್ನಗಳಿಗೆ, ಸೂಕ್ತ ಸಂಗ್ರಹಣಾ ಸೌಲಭ್ಯ ಲಭಿಸಲಿದ್ದು, ಬೆಲೆ ಸ್ಥಿರತೆ ಹಾಗೂ ಮೌಲ್ಯವರ್ಧನೆಗೆ, ಬೆಂಬಲ ದೊರೆಯಲಿದೆ. ಕೃಷಿ ಉತ್ಪನ್ನಗಳನ್ನು ಸಂಗ್ರಹಿಸಿ, ಸೂಕ್ತ ಸಮಯದಲ್ಲಿ ವಿದೇಶಕ್ಕೆ ರಫ್ತು ಮಾಡಲು, ಹೆಚ್ಚಿನ ಅವಕಾಶ ಲಭಿಸಲಿದೆ ಎಂದು, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ, ಪ್ರಕಟಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>